# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 598 (695) |
| ಸದಸ್ಯರ ಹೆಸರು | ಡಾ|| ಎಂ.ಜಿ.ಮುಳೆ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | 09.03.2026 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ತಾಂತ್ರಿಕ ಶಿಕ್ಷಣವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತ್ಯೇಕ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಯಾವುದಾದರೂ ಅಧಿಕೃತ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ; | ಬೀದರ್ ಜಿಲ್ಲೆಯಲ್ಲಿ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಸ್ಥಾಪಿಸುವ ಪ್ರಸ್ತಾವನೆ ಸ್ವೀಕೃತವಾಗಿದೆ. |
| ಆ) | ಒಂದು ವೇಳೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದಲ್ಲಿ ಅದು ಪ್ರಸ್ತುತ ಯಾವ ಹಂತದಲ್ಲಿದೆ; (ಆಡಳಿತಾತ್ಮಕ ಅನುಮೋದನೆ, ಆರ್ಥಿಕ ಇಲಾಖೆಯ ಸಹಮತಿ ಅಥವಾ ಸ್ಥಳ ಗುರುತಿಸುವಿಕೆ ಕುರಿತು ಸಂಪೂರ್ಣ ವಿವರ ನೀಡುವುದು) | ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ. ಆದ್ದರಿಂದ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಸ್ಥಾಪಿಸುವ ಉದ್ದೇಶವನ್ನು ಸರ್ಕಾರ ಹೊಂದಿರುವುದಿಲ್ಲ. |
| ಇ) | ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ತಾಂತ್ರಿಕ ಶಿಕ್ಷಣಕ್ಕೆ ದಾಖಲಾಗಿರುವ ಮಹಿಳಾ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ಪ್ರತ್ಯೇಕ ಮಹಿಳಾ ಕಾಲೇಜಿನ ಬೇಡಿಕೆಯನ್ನು ಪರಿಗಣಿಸಿ ಸರ್ಕಾರವು ವಿಶೇಷ ಆದ್ಯತೆ ನೀಡಲಿದೆಯೇ; | ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣಕ್ಕಾಗಿ ಒಟ್ಟು 631 ವಿದ್ಯಾರ್ಥಿನಿಯರು ಪ್ರವೇಶ ಪಡೆದಿದ್ದು, ವಿವರ ಈ ಕೆಳಕಂಡಂತಿದೆ: |

| ಸಂಸ್ಥೆ | ವರ್ಷ | ಒಟ್ಟು ಅನುಮೋದಿತ ಪ್ರವೇಶಾತಿ | ವಿದ್ಯಾರ್ಥಿನಿಯರಿಗಾಗಿ ಮೀಸಲಿಟ್ಟ ಪ್ರವೇಶಾತಿ | ಪ್ರವೇಶ ಪಡೆದ ವಿದ್ಯಾರ್ಥಿನಿಯರ ಸಂಖ್ಯೆ |
|---|---|---|---|---|
| ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ | 2023-24 | 120 | - | 58 |
| | 2024-25 | 210 | - | 113 |
| | 2025-26 | 210 | - | 135 |
| ಸರ್ಕಾರಿ ಪಾಲಿಟೆಕ್ನಿಕ್, ಬೀದರ್ | 2023-24 | 390 | 104 | 75 |
| | 2024-25 | 390 | 104 | 73 |
| | 2025-26 | 390 | 104 | 67 |

| | | | | |
|---|---|---|---|---|
| ಸರ್ಕಾರಿ ಪಾಲಿಟೆಕ್ನಿಕ್, ಔರಾದ್ | 2023-24 | 180 | 50 | 20 |
| | 2024-25 | 210 | 57 | 8 |
| | 2025-26 | 210 | 57 | 24 |
| ಶ್ರೀ ಮಾಣಿಕ್ ರಾಂ ಪಾಟೀಲ್ ರೂರಲ್ ಪಾಲಿಟೆಕ್ನಿಕ್, ರಾಣಾಕುಶನೂರು | 2023-24 | 240 | 70 | 15 |
| | 2024-25 | 240 | 70 | 10 |
| | 2025-26 | 240 | 70 | 25 |
| ಬಸವಕಲ್ಯಾಣ ಪಾಲಿಟೆಕ್ನಿಕ್, ಬೀದರ್ | 2023-24 | 210 | - | 02 |
| | 2024-25 | 210 | - | 02 |
| | 2025-26 | 210 | - | 04 |
| ಒಟ್ಟು | | 3660 | 686 | 631 |

ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಒಟ್ಟು ಅನುದಾನಿತ ಪ್ರವೇಶಾತಿಯಲ್ಲಿ ಶೇ.30 ರಷ್ಟು ಪ್ರವೇಶಾತಿಯನ್ನು ವಿದ್ಯಾರ್ಥಿನಿಯರಿಗಾಗಿ ಮೀಸಲಿಡಲಾಗಿದೆ.

| | | |
|---|---|---|
| ಈ) | ಹೊಸ ಕಾಲೇಜು ಸ್ಥಾಪನೆಗೆ ಅಗತ್ಯವಾದ ಭೂಮಿ ಸುಸಜ್ಜಿತ ಕಟ್ಟಡದ ನಿರ್ಮಾಣ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳನ್ನು ಸೃಷ್ಟಿಸಿ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಉತ್ತರವನ್ನು ಪ್ರಶ್ನೆ (ಆ)ರಲ್ಲಿ ಒದಗಿಸಲಾಗಿದೆ. |
| ಉ) | ಗಡಿ ಭಾಗ ಹಾಗೂ ಕಲ್ಯಾಣ ಕರ್ನಾಟಕ (Article 371J) ವ್ಯಾಪ್ತಿಗೆ ಬರುವ ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ವೃತ್ತಿಪರ ಶಿಕ್ಷಣಕ್ಕೆ ಉತ್ತೇಜನ ನೀಡಲು ವಿಶೇಷ ಪ್ಯಾಕೇಜ್ ಅಥವಾ ಕೇಂದ್ರ ಸರ್ಕಾರದ ಅನುದಾನವನ್ನು ಪಡೆಯುವ ಯೋಜನೆ ಸರ್ಕಾರದ ಮುಂದಿದೆಯೇ; | ಅಂತಹ ಯೋಜನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ. |
| ಊ) | ಈ ಉದ್ದೇಶಿತ ಮಹಿಳಾ ಪಾಲಿಟೆಕ್ನಿಕ್ ಕಾಲೇಜನ್ನು ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಸರ್ಕಾರ ಕಾಲಮಿತಿಯನ್ನು ಹಾಕಿಕೊಂಡಿದೆಯೇ? | ಉದ್ಭವಿಸುವುದಿಲ್ಲ |

ಕಡತ ಸಂಖ್ಯೆ: ಇಡಿ 24 ಹೆಚ್‌ಪಿಟಿ 2026)

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು